# ಕರ್ನಾಟಕ ವಿಧಾನ ಪರಿಷತ್ತು

1. **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 1379
2. **ಸದಸ್ಯರ ಹೆಸರು** : ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು)
3. **ಉತ್ತರಿಸಬೇಕಾದ ದಿನಾಂಕ** : 22.08.2025
4. **ಉತ್ತರಿಸುವವರು** : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರಸ್ತುತ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಸಹಾಯಕ ನಿರ್ದೇಶಕ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳಿಗೆ, ಯಾವ ಸಂದರ್ಭದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಬಡ್ತಿ ನೀಡುತ್ತೀರಿ: ಪ್ರಸ್ತುತ ಖಾಲಿ ಇರುವ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗಳಿಗೆ ಅನ್ಯ ಇಲಾಖೆ ಅಧಿಕಾರಿಗಳು ಬಂದು ಕರ್ತವ್ಯ ನಿರ್ವಹಣೆ ಮಾಡುತ್ತಿದ್ದು, ಆಡಳಿತದಲ್ಲಿ ತುಂಬಾ ಗಂಭೀರ ಪರಿಣಾಮ ಬೀರುತ್ತಿರುವುದರಿಂದ PDO ರವರ ಸೀನಿಯರ್ ಲಿಸ್ಟ್ ಅಡ್ಡಿ ಬಂದರೆ ನಿಯಮ 32ರಲ್ಲಿ ಸಹಾಯಕ ನಿರ್ದೇಶಕರಿಗೆ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಬಡ್ತಿ ನೀಡಬಹುದಲ್ಲವೆ; | ಖಾಲಿ ಹುದ್ದೆಗಳ ಲಭ್ಯತೆಗಳನ್ನಾಧರಿಸಿ ಸಹಾಯಕ ನಿರ್ದೇಶಕರು ವೃಂದದ ಜೇಷ್ಠತಾ ಪಟ್ಟಿಯಲ್ಲಿನ ಹಿರಿತನವನ್ನು ಪರಿಗಣಿಸಿ ಮುಂಬಡ್ತಿ ಪರಿಗಣನಾವಲಯದಲ್ಲಿ ಬರುವ ಸಹಾಯಕ ನಿರ್ದೇಶಕರುಗಳ ಸೇವಾ ವಿವರಗಳೊಂದಿಗೆ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಮಂಡಿಸಿ ಸದರಿ ಸಮಿತಿಯ ಶಿಫಾರಸ್ಸು / ನಿರ್ಣಯದಂತೆ ಮುಂಬಡ್ತಿ ನೀಡಲು ಕ್ರಮವಹಿಸಲಾಗಿರುತ್ತದೆ.<br><br>ಮುಂದುವರೆದು, ಅಧಿಕಾರಿಗಳಿಗೆ ಯಾವುದಾದರೂ ಹುದ್ದೆಗೆ ನಿಯಮ 32ರಡಿ ಸ್ವತಂತ್ರ ಪ್ರಭಾರದಲ್ಲಿರಿಸಬೇಕಾದಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಆ ಅಧಿಕಾರಿಯು ಸ್ಥಾನವನ್ನ ಮುಂಬಡ್ತಿ ಹೊಂದಲು ಹೊಂದಿರುವ ಎಲ್ಲಾ ಅರ್ಹತೆಗಳನ್ನು ಹೊಂದಿರಬೇಕಾಗಿರುತ್ತದೆ.<br><br>ಸಹಾಯಕ ನಿರ್ದೇಶಕ ಹುದ್ದೆಯಿಂದ ಕಾರ್ಯನಿರ್ವಾಹಕ ಅದಿಕಾರಿ/ಸಹಾಯಕ ಕಾರ್ಯದರ್ಶಿ ವೃಂದಕ್ಕೆ ಬಡ್ತಿ ನೀಡಲು ಮುಂಬಡ್ತಿಯ ಶ್ರೇಣೀಕೃತ ವ್ಯವಸ್ಥೆಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯು ಮೂಲ ಹಾಗೂ ತಳಮಟ್ಟದ ಹುದ್ದೆಯಾಗಿರುತ್ತದೆ. ಈಗಾಗಲೇ ದಿನಾಂಕ:21.02.2014ರಂದು ಹೊರಡಿಸಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಜೇಷ್ಠತಾ ಪಟ್ಟಿಯನ್ನಾಧರಿಸಿ ಈಗಾಗಲೇ ಮುಂಬಡ್ತಿ ಹೊಂದಿ ನಂತರದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಉಪ ಕಾರ್ಯದರ್ಶಿ ಹುದ್ದೆಗೆ ಮುಂಬಡ್ತಿ ಹೊಂದಿದವರ ಪೈಕಿ ಕೆಲವರ ಜೇಷ್ಠತಾ ಕ್ರಮಾಂಕಗಳು ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: |

| | | |
|---|---|---|
| | | 4524/2021ರ ಹಾಗೂ ತತ್ಸಂಬಂಧಿತ ಪ್ರಕರಣಗಳಲ್ಲಿ ನೀಡಿರುವ ತೀರ್ಪಿನಡಿ ಪರಿಶೀಲಿಸಿ ದಿನಾಂಕ: 13..06.2024ರಂದು ಪ್ರಕಟಿಸಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಕರಡು ಜೇಷ್ಠತಾ ಪಟ್ಟಿಯಲ್ಲಿ ಕೆಳ ಕ್ರಮಾಂಕದಲ್ಲಿ ಜೇಷ್ಠತೆ ನಿಗಧಿಯಾಗಿರುತ್ತದೆ. ಈ ಕಾರಣಕ್ಕೆ ಹಾಗೂ ದಿನಾಂಕ:13.06.2024ರಂದು ಪ್ರಕಟಿಸಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಕರಡು ಜೇಷ್ಠತಾ ಪಟ್ಟಿಯಲ್ಲಿ ಕೆಳ ಕ್ರಮಾಂಕದಲ್ಲಿ ಜೇಷ್ಠತೆ ನಿಗಧಿಯಾಗಿರುತ್ತದೆ. ಈ ಕಾರಣಕ್ಕೆ ಹಾಗೂ ದಿನಾಂಕ:13.06.2024ರಂದು ಪ್ರಕಟಿಸಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಕರಡು ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣವು ಬಾಕಿ ಇರುವ ಕಾರಣ ಸದರಿ ಜೇಷ್ಠತಾ ಪಟ್ಟಿಯು ಅಂತಿಮಗೊಂಡಿಲ್ಲವಾದ್ದರಿಂದ ಕೆ.ಸಿ.ಎಸ್.ಆರ್ ನಿಯಮ 32ರಡಿ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಸ್ವತಂತ್ರ ಪ್ರಭಾರದಲ್ಲಿರಿಸಲು ಸಾಧ್ಯವಾಗಿರುವುದಿಲ್ಲ..<br><br>ಈ ಮಧ್ಯೆ ರಾಜ್ಯದಲ್ಲಿನ ತಾಲ್ಲೂಕು ಪಂಚಾಯಿತಿ ಕಛೇರಿಗಳಲ್ಲಿ ವಿವಿಧ ಕಾರಣಗಳಿಂದ ಖಾಲಿಯಿರುವ / ಖಾಲಿಯಾಗುವ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಹೆಚ್ಚುವರಿ ಪ್ರಭಾರದಲ್ಲಿರಿಸುವ ಸಂದರ್ಭಗಳಲ್ಲಿ ಆಡಳಿತಾತ್ಮಕ ಹಿತದೃಷ್ಟಿಯಿಂದ ಏಕರೂಪ ಮಾನದಂಡಗಳನ್ನು ಅನುಸರಿಸುವುದು ಅತ್ಯಗತ್ಯವೆಂದು ಸುತ್ತೋಲೆ ಸಂಖ್ಯೆ: ಗ್ರಾಅಪ 177 ಪಬವ 2022 (ಇ) ದಿನಾಂಕ: 02.09.2022ನ್ನು ಹೊರಡಿಸಲಾಗಿದ್ದು ಸದರಿ ಸುತ್ತೋಲೆಯಲ್ಲಿನ ಸೂಚನೆಗಳನ್ವಯ ತಾಲ್ಲೂಕು ಪಂಚಾಯಿತಿಯಲ್ಲಿ ಖಾಲಿ ಇರುವ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಹೆಚ್ಚುವರಿ ಪ್ರಭಾರದಲ್ಲಿರಿಸಲು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದ್ದು, ಅದರನ್ವಯ ಖಾಲಿಯಿರುವ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಅಧಿಕಾರಿಗಳು ಹೆಚ್ಚುವರಿ ಪ್ರಭಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಕಛೇರಿಯ ದೈನಂದಿನ ಕೆಲಸ ಕಾರ್ಯಗಳಿಗೆ ಯಾವುದೇ |

| | | |
|---|---|---|
| | | ಅಡಚಣೆಯಾಗದಂತೆ ಕರ್ತವ್ಯ ನಿರ್ವಹಣೆ ಮಾಡಲಾಗುತ್ತಿದೆ. |
| (ಆ) | ಹೈದರಾಬಾದ್ ಕರ್ನಾಟಕದಲ್ಲಿ ಸುಮಾರು ಕಾರ್ಯನಿರ್ವಾಹಕ ಅಧಿಕಾರಿಗಳ ಹುದ್ದೆಗಳು ಖಾಲಿ ಇದ್ದು, ಸಹಾಯಕ ನಿರ್ದೇಶಕರಿಗೆ ನಿಯಮ 32ರಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗಳಿಗೆ ಭರ್ತಿ ನೀಡಲು ಅವಕಾಶ ಇದೆಯೇ; ಇದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ; | ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 32ರ ಟಿಪ್ಪಣಿ 1: ರಲ್ಲಿ ಈ ಕೆಳಗಿನಂತೆ ಉಲ್ಲೇಖಿಸಲಾಗಿರುತ್ತದೆ;<br><br>ಟಿಪ್ಪಣಿ-1: ಈ ನಿಯಮದ ಮೇರೆಗೆ ಸರ್ಕಾರಿ ನೌಕರನನ್ನು ಖಾಲಿ ಇರುವ ಹುದ್ದೆಯ ಪ್ರಸಕ್ತ ಕರ್ತವ್ಯಗಳ ಪ್ರಭಾರವನ್ನು ನೋಡಿಕೊಳ್ಳುವಂತೆ ನೇಮಕ ಮಾಡಬೇಕಾದರೆ, ಆತನು ಆ ಹುದ್ದೆಗೆ ಅನ್ವಯಿಸುವ ಕಡರ್ ಮತ್ತು ನೇಮಕಾತಿ ನಿಯಮಗಳಿಗನುಸಾರವಾಗಿ ಆ ಹುದ್ದೆಯಲ್ಲಿ ಸ್ಥಾನಪನ್ನನಾಗಿ ಪದೋನ್ನತಿ ಪಡೆಯುವುದಕ್ಕೆ ಅರ್ಹನಾಗಿರಬೇಕು ಅಥವಾ ಸಮಾನ ಅಥವಾ ಮೇಲಿನ ದರ್ಜೆಯ ಹುದ್ದೆಯನ್ನು ಧಾರಣ ಮಾಡಿದ್ದಿರಬೇಕು.<br><br>ಪ್ರಸ್ತುತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯಗಳಲ್ಲಿ ವಿವಾದಗಳು ಇರುವುದರಿಂದ ವಿವಾದಗಳು ಅಂತ್ಯಗೊಂಡು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ / ಸಹಾಯಕ ನಿರ್ದೇಶಕ ವೃಂದದ ಜೇಷ್ಠತಾ ಪಟ್ಟಿಯು ಅಂತಿಮಗೊಳ್ಳುವುದನ್ನು ನಿರೀಕ್ಷಿಸಲಾಗುತ್ತಿದೆ. |
| (ಇ) | ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಇತ್ತೀಚೆಗೆ ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ಹಾಗೂ ಕರಾ ವಸೂಲಿಗಾರ ಸಿಬ್ಬಂದಿಗಳಿಗೆ ಬಡ್ತಿ ನೀಡಲಾಗಿರುತ್ತದೆ; ಬಡ್ತಿ ನೀಡಿದ ಗ್ರಾಮ ಪಂಚಾಯಿತಿಗಳಲ್ಲಿ ಸದರಿ ಹುದ್ದೆಗಳು ಖಾಲಿಯಾಗಿದ್ದು, ಯಾವುದೇ ಹುದ್ದೆಗೆ ನೇಮಕಾತಿ ಮಾಡದಿರುವುದರಿಂದ ಗ್ರಾಮ ಪಂಚಾಯಿತಿಗಳಿಗೆ ಸರಿಯಾಗಿ ಕಾರ್ಯನಿರ್ವಹಣ ಮಾಡಲು ಸಾಧ್ಯವಾಗದಿರುವ ಬಗ್ಗೆ, ಯಾವ ಕ್ರಮ ಕೈಗೊಳ್ಳಲಾಗಿದೆ? | 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು 2020ನ್ನು ರಚಿಸಲಾಗಿದ್ದು, ಈ ನಿಯಮಗಳಂತೆ ಬಿಲ್ ಕಲೆಕ್ಟರ್ ಮತ್ತು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಲ್ಲಿ ಮಂಜೂರಾದ ಹುದ್ದೆ ಖಾಲಿ ಇದ್ದಲ್ಲಿ, ವಾಟರ್ ಆಪರೇಟರ್ / ಅಟೆಂಡೆಂಟ್ / ಕ್ಲೀನರ್ಸ್ ವೃಂದದಿಂದ ಸಂಯುಕ್ತ ಜೇಷ್ಠತಾ ಪಟ್ಟಿ ಆಧಾರದ ಮೇಲೆ ಗ್ರಾಮ ಪಂಚಾಯಿತಿಯು ಮುಂಬಡ್ತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. |

| | | |
|---|---|---|
| | | 2. ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಗ್ರಾಮ ಪಂಚಾಯತಿ ಸಿಬ್ಬಂದಿ ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ: 26.06.2024 ರಂದು ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದ್ದು, ಆಯಾ ಜಿಲ್ಲಾ ಪಂಚಾಯತಿಗಳ ಹಂತದಲ್ಲಿ ಕ್ರಮ ವಹಿಸಲಾಗುತ್ತಿದೆ.<br><br>3. ಪ್ರಸ್ತುತ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ರಲ್ಲಿ ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸೂಕ್ತ ತಿದ್ದುಪಡಿ ತರುವ ನಿಟ್ಟಿನಲ್ಲಿ, ರಾಜ್ಯದ ಪ್ರತಿ ಗ್ರಾಮ ಪಂಚಾಯತಿಯಲ್ಲಿ ಹೊಸದಾಗಿ ಒಂದು ಡಾಟಾ ಎಂಟ್ರಿ ಆಪರೇಟರ್ ಅನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳುವ ಸೂಚನೆಯನ್ನು ದಿನಾಂಕ: 01.01.2024 ರಂದು ತಾತ್ಕಾಲಿಕವಾಗಿ ತಡೆ ಹಿಡಿಯಲಾಗಿರುತ್ತದೆ.<br><br>4. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸನೆನಿ 2024, ದಿನಾಂಕ:29-03-2025 ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳ ನೇಮಕಾತಿಗಾಗಿ ಹೊಸದಾಗಿ ಅಧಿಸೂಚನೆ ಹೊರಡಿಸುವುದನ್ನು ತಡೆಹಿಡಿಯುವ ಬಗ್ಗೆ ನಿರ್ದೇಶನ ನೀಡಲಾಗಿದೆ. ನೇಮಕಾತಿ ಅಧಿಸೂಚನೆ ಹೊರಡಿಸಲು ಪ್ರತಿಬಂಧ ಇರುವುದರಿಂದ ಈ ಹಂತದಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳ ನೇರ ನೇಮಕಾತಿ ಮಾಡದಂತೆ ಕ್ರಮ ಕೈಗೊಳ್ಳಲು ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸುತ್ತೋಲೆ ಸಂಖ್ಯೆ: RDPR 417 GPA 2025 ದಿನಾಂಕ:06.06.2025ರಲ್ಲಿ ನಿರ್ದೇಶನ ನೀಡಲಾಗಿದೆ. |

| | | |
|---|---|---|
| | | 5. ಒಳ ಮೀಸಲಾತಿ ಮಾರ್ಗಸೂಚಿ ಬಂದ ನಂತರ ನೇರ ನೇಮಕಾತಿ ಕೋಟಾದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮ ವಹಿಸಲಾಗುವುದು. |

ಸಂಖ್ಯೆ: ಗ್ರಾಅಪ 159 ಪಬವ 2025 (ಇ)

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು